ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಗುರುವಾರ, ದಿನಾಂಕ : 10 ನೇ ಡಿಸೆಂಬರ್, 2020

ತಲಕಾಡನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸುವ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

400 (359) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ತಲಕಾಡನ್ನು ಪ್ರವಾಸೋದ್ಯಮ ಇಲಾಖೆ ಗುರುತಿಸಿರುವ ಐತಿಹಾಸಿಕ ಪ್ರವಾಸೋದ್ಯಮ ಸ್ಥಳಗಳ ಪ್ರವಾಸೋದ್ಯಮ ಪಟ್ಟಿಗೆ ಸೇರಿಸುವಂತೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ತಲಕಾಡು, ಮುಡುಕುತೊರೆ, ಮಾಧವಮಂತ್ರಿ ಅಣೆಕಟ್ಟು, ಇವುಗಳನ್ನು ಪ್ರವಾಸೋದ್ಯಮ ಪಟ್ಟಿಗೆ ಸೇರಿಸಿ ಅಭಿವೃದ್ಧಿಪಡಿಸಲು ಹಾಗೂ ಮಾಧವ ಮಂತ್ರಿ ಅಣೆಕಟ್ಟೆನಲ್ಲಿ ದೋಣಿವಿಹಾರ ಕೇಂದ್ರ ಆರಂಭಿಸಲು ಸರ್ಕಾರದಿಂದ ಕ್ರಮ ಜರುಗಿಸಲಾಗುವುದೇ;

(ಇ) ಮುಡುಕುತೊರೆ ಮಲ್ಲಿಕಾರ್ಜುನ ದೇವಾಲಯದ ಪುನರ್ ನಿರ್ಮಾಣ ಕಾರ್ಯದಲ್ಲಿ ಅಲ್ಲಿರುವ ಪ್ರಾಚೀನ ವರ್ಣಚಿತ್ರಗಳಿಗೆ /ಶಿಲ್ಪಿಗಳಿಗೆ ಧಕ್ಕೆ ಆಗದಂತೆ ಎಚ್ಚರಿಕೆ ವಹಿಸಿ ಕಾಮಗಾರಿ ನಿರ್ವಹಿಸಲು ಕ್ರಮ ವಹಿಸಲಾಗುವುದೇ?